**All India Radio: Bangalore**
**Regional Bulletin In Kannada**
**06.06.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರು ರಾಜ್ಯ ಕಂಡಂತಹ ಮುತ್ಸದ್ದಿ ರಾಜಕಾರಣಿಗಳಲ್ಲಿ ಒಬ್ಬರು ; ಮುಖ್ಯಮಂತ್ರಿ ಸಿದ್ದರಾಮಯ್ಯ
2. ಡೀಮ್ಡ್, ಸೆಕ್ಷನ್ ೪ ಬಿಕ್ಕಟ್ಟು ಪರಿಹಾರಕ್ಕೆ ಶೀಘ್ರವೇ ಕೇಂದ್ರ, ಸುಪ್ರೀಂಗೆ ಮನವಿ: ಸಚಿವ ಈಶ್ವರ್ ಖಂಡ್ರೆ
3. ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣ ಕಾಲ್ತುಳಿತ ಪ್ರಕರಣ: ಆರ್‌ಸಿಬಿ ಮಾರ್ಕೆಟಿಂಗ್ ಮುಖ್ಯಸ್ಥ ಸೇರಿ ನಾಲ್ವರ ಬಂಧನ
4. ವಿಕಸಿತ ಕೃಷಿ ಸಂಕಲ್ಪ ಅಭಿಯಾನ: ರಾಜ್ಯದ ಹಲವು ಜಿಲ್ಲೆಗಳಲ್ಲಿ ಯಶಸ್ವಿ

<><><><>

ಮಾಜಿ ಮುಖ್ಯಮಂತ್ರಿ ದೇವರಾಜ ಅರಸು ಅವರು ರಾಜ್ಯ ಕಂಡಂಥ ಮುತ್ಸದ್ದಿ ರಾಜಕಾರಣಿಗಳಲ್ಲಿ ಒಬ್ಬರು. ಬಡವರು, ಅನ್ಯಾಯ, ತುಳಿತಕ್ಕೊಳಗಾದವರಿಗೆ, ಅವಕಾಶಗಳಿಂದ ವಂಚಿತರಾದವರ ಬಗ್ಗೆ ಅಪಾರ ಕಾಳಜಿ ಹೊಂದಿದ್ದವರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಅವರಿಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ ೪೩ನೇ ಪುಣ್ಯ ಸ್ಮರಣೆ ಅಂಗವಾಗಿ ಅವರ ಪ್ರತಿಮೆ ಬಳಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿದ ನಂತರ ಮಾತನಾಡಿದರು. ದಿವಂಗತ ದೇವರಾಜ ಅರಸು ಅವರ ಪುಣ್ಯ ತಿಥಿಯಂದು ಸರ್ಕಾರ ಹಾಗೂ ಏಳು ಕೋಟಿ ಕನ್ನಡಿಗರ ವತಿಯಿಂದ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸೂಚಿಸಿ ಸ್ಮರಿಸಿಕೊಂಡಿದೆ ಎಂದರು. ರಾಜಕೀಯದಲ್ಲಿ ಅವಕಾಶ ಸಿಗದ ಜನಾಂಗದವರಿಗೆ ಪ್ರಾತಿನಿಧ್ಯ ದೊರಕಿಸಿಕೊಟ್ಟರು, ಅವರಿಂದಾಗಿ ಬಡತನ ನಿರ್ಮೂಲನಾ ಕಾರ್ಯಕ್ರಮ ಕರ್ನಾಟಕದಲ್ಲಿ ಅಚ್ಚುಕಟ್ಟಾಗಿ ನೆರವೇರಿತು. ರಾಜಕೀಯದಲ್ಲಿ ಅವಕಾಶ ಸಿಗದ ಜನಾಂಗದವರಿಗೆ ಪ್ರಾತಿನಿಧ್ಯ ದೊರಕಿಸಿಕೊಟ್ಟರು, ಹಾವನೂರು ಆಯೋಗವನ್ನು ರಚನೆ ಮಾಡಿ, ಅದರ ವರದಿ ಪಡೆದು ಜಾರಿ ಮಾಡಿ ಉದ್ಯೋಗದಲ್ಲಿ ಮೀಸಲಾತಿ ಕೊಟ್ಟರು ಎಂದರು. ಸಾಮಾಜಿಕ ನ್ಯಾಯದಲ್ಲಿ ಬಲವಾದ ನಂಬಿಕೆ ಇಟ್ಟ ದೇವರಾಜ ಅರಸು ಅವರು ನಿರ್ಗತಿಕರು, ಭೂ ರಹಿತರಿಗೆ ನ್ಯಾಯ ಕೊಡಿಸುವ ಕೆಲಸ ಮಾಡಿದರು. ಉಳುವವನೇ ಭೂಮಿಯ ಒಡೆಯ ಕಾನೂನು

ಜಾರಿ ಮಾಡಿ ಭೂರಹಿತರನ್ನು ಭೂ ಒಡೆಯರಾಗಿಸಿದರು. ಜೀತ ಪದ್ಧತಿಯನ್ನು ರದ್ದು ಮಾಡಿದರು, ಇವರು ದೀರ್ಘ ಕಾಲ ರಾಜ್ಯದ ಮುಖ್ಯಮಂತ್ರಿಗಳಾಗಿದ್ದವರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

<><><>

ಅರಣ್ಯ ಕಾಯಿದೆ ೧೯೬೩ರ ಸೆಕ್ಷನ್ ೪ರಡಿ ಅಧಿಸೂಚನೆ ಆಗುವ ಮುನ್ನ ಮಂಜೂರಾಗಿರುವ ಭೂಮಿಯನ್ನು ಅರಣ್ಯದಿಂದ ಕೈಬಿಡಲು ಸರ್ಕಾರಕ್ಕೆ ಅವಕಾಶವಿದ್ದು, ಅಧಿಸೂಚನೆಯ ನಂತರ ೩೦-೪೦ ವರ್ಷಗಳಿಂದ ಮನೆಕಟ್ಟಿರುವ, ಉಳಿಮೆ ಮಾಡುತ್ತಿರುವ ಜನರಿಗೆ ನ್ಯಾಯ ಕೊಡಿಸಲು ಕೇಂದ್ರ ಹಾಗೂ ಸುಪ್ರೀಂಕೋರ್ಟ್‌ಗೆ ವಿಶೇಷ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದ್ದಾರೆ. ವಿಕಾಸಸೌಧದಲ್ಲಿಂದು ಚಿಕ್ಕಮಗಳೂರು ಜಿಲ್ಲೆಯ ಶಾಸಕರುಗಳು ಮತ್ತು ಅರಣ್ಯ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಸತಿ ಪ್ರದೇಶ, ಪಟ್ಟಾಭೂಮಿ ಇತ್ಯಾದಿ ಇರುವ ಪರಿಭಾವಿತ ಅರಣ್ಯ ಹಾಗೂ ಸೆಕ್ಷನ್ ೪ ಅಧಿಸೂಚನೆ ನಂತರ ಮಂಜೂರಾಗಿರುವ ಜಮೀನಿಗೆ ಪರ್ಯಾಯವಾಗಿ ಬೇರೆಡೆ ಲಭ್ಯವಿರುವ ಅರಣ್ಯೇತರ ಭೂಮಿ ನೀಡಿ ಈ ಜಮೀನನ್ನು ಅರಣ್ಯ ವ್ಯಾಪ್ತಿಯಿಂದ ಕೈಬಿಡುವಂತೆ ಸುಪ್ರೀಂಕೋರ್ಟ್ ಮತ್ತು ಕೇಂದ್ರಕ್ಕೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.  ಹಲವು ಪ್ರಕರಣಗಳಲ್ಲಿ ಸೆಕ್ಷನ್ ೪ ಅಧಿಸೂಚನೆ ಆಗಿ ೬೦-೭೦ ವರ್ಷವಾಗಿದ್ದರೂ ಇನ್ನೂ ಸೆಕ್ಷನ್ ೧೭ ಆಗಿರುವುದಿಲ್ಲ. ೧೯೮೦ರ ಅರಣ್ಯ ಸಂರಕ್ಷಣಾ ಕಾಯಿದೆ ಜಾರಿ ಬಳಿಕ ಈಗ ಅಂತಹ ಅರಣ್ಯ ಕೈಬಿಡುವುದು ಕಷ್ಟಸಾಧ್ಯವಾಗಿದೆ. ಹೀಗಾಗಿ ಕೇಂದ್ರ ಹಾಗೂ ಸುಪ್ರೀಂಕೋರ್ಟ್‌ಗೆ ಮನವಿ ಮಾಡುವುದು ಅನಿವಾರ್ಯ ಎಂದು ತಿಳಿಸಿದರು.

<><><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು -ಆರ್‌ಸಿಬಿ ಮಾರ್ಕೆಟಿಂಗ್ ಮುಖ್ಯಸ್ಥ ಮತ್ತು ಡಿಎನ್‌ಎ ಕಾರ್ಯಕ್ರಮ ನಿರ್ವಹಣಾ ಕಂಪನಿ ಸಿಬ್ಬಂದಿ ಸೇರಿದಂತೆ ನಾಲ್ವರನ್ನು ಬಂಧಿಸಲಾಗಿದೆ. ಆರ್‌ಸಿಬಿಯ ಮಾರ್ಕೆಟಿಂಗ್ ಮುಖ್ಯಸ್ಥ ನಿಖಿಲ್ ಸೋಸಲೆ, ಡಿಎನ್‌ಎ ಈವೆಂಟ್ ಮ್ಯಾನೇಜ್‌ಮೆಂಟ್‌ನ ಸುನಿಲ್ ಮ್ಯಾಥ್ಯೂ, ಕಿರಣ್ ಮತ್ತು ಸುಮಂತ್ ಅವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಜಂಟಿ ಕಾರ್ಯಾಚರಣೆಯಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ - ಕೆಎಸ್‌ಸಿಎ ಕಾರ್ಯದರ್ಶಿ ಶಂಕರ್ ಮತ್ತು ಕೆಎಸ್‌ಸಿಎ ಖಜಾಂಚಿ ಜಯರಾಮ್ ಅವರ ನಿವಾಸಗಳ ಮೇಲೂ ಪೊಲೀಸರು ದಾಳಿ ನಡೆಸಿದ್ದಾರೆ. ಈ

ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಕಬ್ಬನ್ ಪಾರ್ಕ್ ಪೊಲೀಸರ ಸಿಬ್ಬಂದಿ ಮತ್ತು ಕೇಂದ್ರ ಅಪರಾಧ ವಿಭಾಗ - ಸಿಸಿಬಿ ವಿಶೇಷ ವಿಭಾಗ ಜಂಟಿ ಕಾರ್ಯಾಚರಣೆ ನಡೆಸಿದೆ. ಬಂಧಿತ ವ್ಯಕ್ತಿಗಳು ಮುಂಬೈಗೆ ತೆರಳುತ್ತಿದ್ದಾಗ ನಾಲ್ವರು ಆರೋಪಿಗಳನ್ನು ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಗೆ ಕರೆತರಲಾಗಿದ್ದು, ಶೇಷಾದ್ರಿಪುರಂ ಸಹಾಯಕ ಪೊಲೀಸ್ ಆಯುಕ್ತರು ವಿಚಾರಣೆ ನಡೆಸುತ್ತಿದ್ದಾರೆ. ವಿಜಯೋತ್ಸವ ಆಚರಣೆ ಕಾರ್ಯಕ್ರಮಕ್ಕಾಗಿ ಕ್ರೀಡಾಂಗಣದಲ್ಲಿ ಉಚಿತ ಟಿಕೆಟ್‌ಗಳು ಲಭ್ಯವಿದೆ ಎಂದು ಅವರು ಘೋಷಿಸಿದ್ದರು. ಬುಧವಾರ ಮಧ್ಯಾಹ್ನ ೧ ಗಂಟೆಗೆ ಗೇಟ್ ಸಂಖ್ಯೆ ೯ ಮತ್ತು ೧೦ ರಲ್ಲಿ ಟಿಕೆಟ್‌ಗಳು ಲಭ್ಯವಿರುತ್ತವೆ ಎಂದು ಅವರು ಘೋಷಿಸಿದ್ದರು ಮತ್ತು ಟಿಕೆಟ್‌ಗಳನ್ನು ವಿತರಿಸಲು ವ್ಯವಸ್ಥೆ ಮಾಡಲಿಲ್ಲ ಎಂದು ಆರೋಪಿಸಲಾಗಿದೆ.

<><><>

ಆಧುನಿಕ ತಂತ್ರಜ್ಞಾನ ಅಳವಡಿಸಿಕೊಂಡು ಹಾಗೂ ಅಭಿವೃದ್ಧಿ ಇಲಾಖೆಗಳ ಯೋಜನೆಗಳ ಪ್ರಯೋಜನ ಪಡೆದು ರೈತರು ಅಧಿಕ ಇಳುವರಿ ಮತ್ತು ಲಾಭಗಳಿಸಬಹುದು ಎಂದು ದಾವಣಗೆರೆ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಟಿ.ಎನ್.ದೇವರಾಜ್ ಹೇಳಿದ್ದಾರೆ. ಹರಿಹರ ತಾಲ್ಲೂಕಿನ ಸಾಲಕಟ್ಟೆ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ವಿಕಸಿತ ಕೃಷಿ ಸಂಕಲ್ಪ ಅಭಿಯಾನದಲ್ಲಿ ರೈತರಿಗೆ ಉಪಯುಕ್ತ ಮಾಹಿತಿ ನೀಡಿ ಮಾತನಾಡಿದರು.

<><><>

ಮುಂಗಾರು ಹಂಗಾಮಿನಲ್ಲಿ ರೈತರು ಕೃಷಿ ವಿಜ್ಞಾನಿಗಳ ಸಲಹೆಯಂತೆ ಬಿತ್ತನೆ ಬೀಜ ಮತ್ತು ಸಂಯುಕ್ತ ರಸಗೊಬ್ಬರ ಬಳಸಿ ಬಿತ್ತನೆ ಮಾಡಿದರೆ ಉತ್ತಮ ಇಳುವರಿ ಪಡೆಯಲು ಸಾಧ್ಯ ಎಂದು ಕೊಪ್ಪಳ ಕೃಷಿ ವಿಸ್ತರಣ ಶಿಕ್ಷಣ ಕೇಂದ್ರದ ಸಹಾಯಕ ಪ್ರಾಧ್ಯಾಪಕ ಡಾ.ವಾಮನಮೂರ್ತಿ ಹೇಳಿದ್ದಾರೆ. ಕೊಪ್ಪಳ ತಾಲ್ಲೂಕಿನ ಹಿರೇಸಿಂಧೋಗಿ ಗ್ರಾಮದಲ್ಲಿ ನಡೆದ ವಿಕಸಿತ ಕೃಷಿ ಸಕಂಲ್ಪ ಅಭಿಯಾನದ ಕಾರ್ಯಕ್ರಮದಲ್ಲಿ ರೈತರೊಂದಿಗೆ ಸಂವಾದ ನಡೆಸಿ ಮಾತಾನಾಡಿದರು.

**ಧ್ವನಿ:- ಡಾ.ವಾಮನಮೂರ್ತಿ ಸಹಾಯಕ ಪ್ರಾಧ್ಯಾಪಕರು ಕೆ.ವಿ.ಕೆ ಕೊಪ್ಪಳ. (೨೫ ಸೆಕೆಂಡ್‌ಗಳು)**

ಪ್ರತಿ ಹಳ್ಳಿ ಹಳ್ಳಿ ಗಳಿಗೆ ರೈತರಿಗೆ ಮಾಹಿತಿ ನೀಡುವ ಕೃಷಿ ವಿಕಸಿತ ಸಂಕಲ್ಪ ಅಭಿಯಾನ ನಡೆದರೆ ಗ್ರಾಮದಲ್ಲಿನ ರೈತರಿಗೆ ಅನುಕೂಲವಾಗಲಿದೆ ಎಂದು ಮೈನಹಳ್ಳಿ ಗ್ರಾಮದ ರೈತರು ಅಭಿಯಾನದಲ್ಲಿ ಭಾಗಿಯಾಗಿ ಮಾತನಾಡಿರು.

**ಬೈಟ್ : ವೀರೇಶ.ರೈತ (೧೧ ಸೆಕೆಂಡ್‌ಗಳು)**

<><><>

ಕೇಂದ್ರದ ಕೃಷಿ ಮಂತ್ರಾಲಯದ ಮಹತ್ವದ ಕಾರ್ಯಕ್ರಮ ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಯಶಸ್ವಿಯಾಗಿ ನಡೆಯುತ್ತಿದೆ. ಕಾರ್ಯಕ್ರಮದ ಅಂಗವಾಗಿ

ಕೃಷಿ ವಿಜ್ಞಾನ ಕೇಂದ್ರದಿಂದ ಜಿಲ್ಲೆಯ ನೆಲಮಂಗಲ ತಾಲೂಕಿನ ಕಾಚಹಳ್ಳಿ ಗ್ರಾಮದಲ್ಲಿ ರೈತರಿಗೆ ಮುಂಗಾರು ಹಂಗಾಮಿನಲ್ಲಿ ಹಮ್ಮಿಕೊಳ್ಳಬೇಕಾದ ಕೃಷಿ ಚಟುವಟಿಕೆಗಳಾದ ಜೈವಿಕ ಗೊಬ್ಬರ, ಕೀಟ ನಾಶಕಗಳ ಬಳಕೆ, ಡ್ರೋನ್ ಮೂಲಕ ರಾಸಾಯನಿಕಗಳ ಸಿಂಪಡಣೆ, ಸೂಕ್ಷ್ಮ ನೀರಾವರಿಯ ಬಳಕೆ ಮತ್ತು ಉಪಯೋಗಗಳು, ತೋಟಗಾರಿಕೆ ಬೆಳೆಗಳಲ್ಲಿ ರೋಗ ನಿರ್ವಹಣೆ ಕುರಿತಂತೆ ವಿಜ್ಞಾನಿ ಡಾ. ಜಿ.ಈಶ್ವರಪ್ಪ ರೈತರಿಗೆ ಮಾಹಿತಿ ನೀಡಿದರು. ರೈತರು ವಿಜ್ಞಾನಿಗಳೊಂದಿಗೆ ಚರ್ಚಿಸಿ, ಅವರ ಸಮಸ್ಯೆಗಳಿಗೆ ಸಲಹೆ ಪಡೆದರು.

<><><><>

ಚಿಕ್ಕಬಳ್ಳಾಪುರ ನಗರಸಭೆಯ ಕಂದಾಯ ಶಾಖೆಗೆ ಸಂಬಂಧಿಸಿದ ಖಾತಾ ಅರ್ಜಿ ಸೇರಿದಂತೆ ಇನ್ನಿತರ ಕಡತಗಳನ್ನು ಸೂಕ್ತ ರೀತಿಯಲ್ಲಿ ನಿರ್ವಹಣೆ ಮಾಡದಿದ್ದಲ್ಲಿ ಹಾಗೂ ಕಡತಗಳು ಕಾಣೆಯಾದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಸಿಬ್ಬಂದಿ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ನಗರಸಭೆಯ ಪೌರಾಯಕ್ತ ಮನ್ಸೂರ್ ಆಲಿ ಎಚ್ಚರಿಕೆ ನೀಡಿದ್ದಾರೆ. ಕಂದಾಯ ವಿಭಾಗದ ಕಡತಗಳನ್ನು ಸೂಕ್ತ ರೀತಿಯಲ್ಲಿ ನಿರ್ವಹಣೆ ಮಾಡುವಂತೆ ಹಲವು ಬಾರಿ ಮೌಖಿಕವಾಗಿ ಸೂಚಿಸಲಾಗಿದ್ದರೂ ಕಡತಗಳ ನಿರ್ವಹಣೆಯಲ್ಲಿ ಬೇಜವಾಬ್ದಾರಿತನ ತೋರಿಸಿ ಸೂಕ್ತ ಕ್ರಮ ವಹಿಸದೆ ಇರುವುದು ಕಂಡು ಬಂದಿರುತ್ತದೆ ಎಂದರು.  ಈ ಹಿನ್ನೆಲೆಯಲ್ಲಿ ಇನ್ನು ಮುಂದೆ ಕಡತಗಳು ಕಾಣೆಯಾಗುವುದು ಮತ್ತು ಕಚೇರಿ ಸಿಬ್ಬಂದಿ ಹೊರತುಪಡಿಸಿ ಬೇರೆ ವ್ಯಕ್ತಿಗಳು ಕಡತಗಳನ್ನು ತೆಗೆದುಕೊಂಡು ಓಡಾಡುವುದು ಗಮನಕ್ಕೆ ಬಂದರೆ ಅವರನ್ನೇ ನೇರ ಹೊಣೆಗಾರರನ್ನಾಗಿ ಮಾಡುವ ಜೊತೆಗೆ ಶಿಸ್ತುಕ್ರಮ ಕೈಗೊಳ್ಳಲು ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸಲಾಗುವುದು ಎಂದು ಪೌರಾಯುಕ್ತರು ಎಚ್ಚರಿಕೆ ನೀಡಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>